# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಯೋಜನೆಗಳನ್ನು 2019-20ನೇ ಸಾಲಿಗೆ ಮುಂದುವರೆಸಲು ಹಾಗೂ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ವಾಕ್ಯ 57 ಆಂಆಸ(2) 2019, ದಿನಾಂಕ 16-4-2019.
2) ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಇವರ ಪ್ರಸ್ತಾವನೆ ಸಂಖ್ಯೆ: ಡಿಎಸ್‌ಕೆ/ಇವಪಿ/50/2018-19/06, ದಿನಾಂಕ:02/04/2019.

ಪ್ರಸ್ತಾವನೆ:

ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ 2019-20ನೇ ಸಾಲಿನ ಆಯವ್ಯಯದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಯೋಜನೆಯಡಿಯಲ್ಲಿ ರೂ.10.00ಕೋಟಿಗಳ ಅನುದಾನವನ್ನು ಒದಗಿಸಿದೆ. ಅದರಂತೆ ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಡಿಯಲ್ಲಿ ಬರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಇಲಾಖೆಗೆ ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿಯಲ್ಲಿ ಮುಂದುವರಿಕೆ ಕಾರ್ಯಕ್ರಮಗಳಿಗೆ ಅನುಬಂಧ-3ರಲ್ಲಿ ಸೂಚಿಸಿರುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ ಇವರಿಗೆ ಸದರಿ ಆದೇಶದಲ್ಲಿನ ಷರತ್ತುಗಳನ್ನು ಪಾಲಿಸಬೇಕೆಂದು ನಿಬಂಧನೆಯನ್ನು ವಿಧಿಸಿ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ (2)ರಲ್ಲಿ ಓದಲಾದ ಆಯುಕ್ತರ ಪ್ರಸ್ತಾವನೆಯಲ್ಲಿ ಕೆಳಕಂಡ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

| ಕ್ರ.ಸಂ. | ಯೋಜನೆಯ ವಿವರ ಮತ್ತು ಲೆಕ್ಕಶೀರ್ಷಿಕೆ | ಕಲ್ಪಿಸಲಾದ ಆಯವ್ಯಯ (ರೂ.ಲಕ್ಷಗಳಲ್ಲಿ) |
|---|---|---|
| 1. | ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿನ ರಸ್ತೆಗಳ ಅಭಿವೃದ್ಧಿ ಲೆಕ್ಕ ಶೀರ್ಷಿಕೆ 4860-04-004-0-01-ಸಕ್ಕರೆ ಕಾರ್ಖಾನೆ ಪ್ರದೇಶಗಳಲ್ಲಿ ರಸ್ತೆಗಳ ಅಭಿವೃದ್ಧಿ-172-ಯೋಜನೆ | 1000.00 |

2019-20ನೇ ಸಾಲಿನ ಆಯವ್ಯಯದಲ್ಲಿ ರಸ್ತೆಕರ ಯೋಜನೆಯಡಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ರೂ.10.00ಕೋಟಿಗಳ ಅನುದಾನ ಕಲ್ಪಿಸಿದ್ದು, ಈ ಯೋಜನೆಯು ಹಲವಾರು ವರ್ಷಗಳಿಂದ ಚಾಲ್ತಿಯಲ್ಲಿದ್ದು, ಇದು ಮುಂದುವರೆದ ಯೋಜನೆಯಾಗಿರುವುದರಿಂದ ಸದರಿ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲು ಆಡಳಿತಾತ್ಮಕ ಅನುಮೋದನೆ ನೀಡಿ ಹಾಗೂ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ 2019-20ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 4860-04-004-0-01-ಸಕ್ಕರೆ ಕಾರ್ಖಾನೆ ಪ್ರದೇಶಗಳಲ್ಲಿ ರಸ್ತೆಗಳ ಅಭಿವೃದ್ಧಿ-172-ಯೋಜನೆಯಡಿ ಒದಗಿಸಲಾಗಿರುವ ರೂ.10.00ಕೋಟಿಗಳ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಮೊತ್ತ ರೂ.2.50ಕೋಟಿಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ವಾಕ್ಯ 13 ಸಸಕಾ 2019, ಬೆಂಗಳೂರು, ದಿನಾಂಕ:25 /04/2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ಹಣ ಒದಗಿಸುವುದು ಒಂದು ಮುಂದುವರೆದ ಯೋಜನೆಯೆಂದು ಪರಿಗಣಿಸಿ, ಸದರಿ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲು ಆಡಳಿತಾತ್ಮಕ ಅನುಮೋದನೆ ನೀಡಿ, 2019-20ನೇ ಸಾಲಿನ ಯೋಜನಾ ಕಾರ್ಯಕ್ರಮಗಳ ಅಡಿಯಲ್ಲಿ ಲೆಕ್ಕ ಶೀರ್ಷಿಕೆ 4860-04-004-0-01 ಸಕ್ಕರೆ ಕಾರ್ಖಾನೆ ಪ್ರದೇಶಗಳಲ್ಲಿ

ರಸ್ತೆಗಳ ಅಭಿವೃದ್ಧಿ-172-ಯೋಜನೆಯಡಿ ಒದಗಿಸಲಾಗಿರುವ ರೂ.10.00ಕೋಟಿಗಳ ಅನುದಾನದ ಪೈಕಿ ಮೊದಲನೇ ತ್ರೈಮಾಸಿಕ ಕಂತಿನ ಮೊತ್ತ ರೂ.2.50ಕೋಟಿಗಳ (ಎರಡು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿದೆ.

1. ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಮೊತ್ತಕ್ಕೆ ಹಾಗೂ ಇದುವರೆಗೆ ಬಿಡುಗಡೆ ಮಾಡಿರುವ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ನಿಗಧಿತ ನಮೂನೆಯಲ್ಲಿ ಕೂಡಲೇ ಸಲ್ಲಿಸತಕ್ಕದ್ದು.

2. ಈ ಉದ್ದೇಶಕ್ಕೆ 2019-20ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ರೂ.10.00ಕೋಟಿ ಅನುದಾನದಲ್ಲಿ ತೆಗೆದುಕೊಳ್ಳಲು ಉದ್ದೇಶಿಸಿರುವ ಎಲ್ಲಾ ಕಾಮಗಾರಿಗಳ ಪಟ್ಟಿಯ ಪ್ರತಿ ಕಾಮಗಾರಿಯ ಅಂದಾಜು ವೆಚ್ಚವನ್ನು ನಮೂದಿಸಿ ಕ್ರಿಯಾ ಯೋಜನೆಯನ್ನು ತಯಾರಿಸಿ, ಅದಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು.

3. ಪ್ರತಿ ಕಾಮಗಾರಿಯ ಅಂದಾಜು ಪಟ್ಟಿಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಮಂಜೂರಾತಿ ಮತ್ತು ಆಡಳಿತಾತ್ಮಕ ಅನುಮೋದನೆ ಪಡೆದುಕೊಂಡು ಅವುಗಳ ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಆಡಳಿತಾತ್ಮಕ ಅನುಮೋದನೆಯಲ್ಲಿ ಆಯಾ ಕಾಮಗಾರಿಗೆ ಇತರೆ ಅನುದಾನದಲ್ಲಿ ವೆಚ್ಚ ಮಾಡಿರುವುದಿಲ್ಲವೆಂದು ಮತ್ತು ರಸ್ತೆ ಕಾಮಗಾರಿಯು ನಿರ್ವಹಣಾ ಅವಧಿಯಲ್ಲಿ ಇರುವುದಿಲ್ಲವೆಂದು ದೃಢೀಕರಿಸತಕ್ಕದ್ದು.

4. 2019-20ನೇ ಸಾಲಿನ ಒಟ್ಟು ವೆಚ್ಚ ಯಾವುದೇ ಕಾರಣಕ್ಕೂ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮೊತ್ತವನ್ನು ಮೀರುವಂತಿಲ್ಲ.

5. ಎಲ್ಲಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು, 2000 ಹಾಗೂ ತತ್ಸಂಬಂಧ ಆದೇಶ/ ಸುತ್ತೋಲೆಗಳನ್ನು ಕಟ್ಟುನಿಟ್ಟಾಗಿ ತಪ್ಪದೆ ಪಾಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಆದೇಶ ಸಂಖ್ಯೆ: ವಾಕೈ 57 ಆಂಆಸ(2) 2019, ದಿನಾಂಕ 16-4-2019ರನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಅನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಶೀಲಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ – ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಹಾಗೂ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ:
1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ A', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ A', ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.

4. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಮೂಲಕ).
6. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಪತ್ರಾಂಕಿತ ಆಪ್ತ ಕಾರ್ಯದರ್ಶಿಯವರು.
8. ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಪತ್ರಾಂಕಿತ ಆಪ್ತ ಕಾರ್ಯದರ್ಶಿಯವರು.
9. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ & ಆರ್), ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆಇಲಾಖೆ(ಸಂ.ಕ),ವಿಕಾಸಸೌಧ,ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ (ಸಕ್ಕರೆ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಆಪ್ತ ಸಹಾಯಕರು.
12. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-1, ವಿಧಾನ ಸೌಧ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಕೋಪಯೋಗಿ ಇಲಾಖೆ - ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
15. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.